ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಯೋಜನೆಗಳು

248 (322), ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಯಾವ ಯಾವ ಯೋಜನೆಗಳು ಅನುಷ್ಠಾನದ ವಿವಿಧ ಹಂತಗಳಲ್ಲಿವೆ?

ಆ) ಇವುಗಳ ಪೈಕಿ, ಯಾವ ಯಾವ ಯೋಜನೆಗಳು ಸ್ಥಗಿತಗೊಂಡಿವೆ?

ಇ) ಈ ಪ್ರಾಧಿಕಾರದ ಅಧ್ಯಕ್ಷರ ಹುದ್ದೆ ಯಾವಾಗಿನಿಂದ ಖಾಲಿ ಇದೆ?

ಈ) ಈ ಹುದ್ದೆಯನ್ನು ಭರ್ತಿ ಮಾಡದೇ ಇರುವುದರಿಂದ ಈ ಯೋಜನೆಗಳ ಅನುಷ್ಠಾನಕ್ಕೆ ಹಿನ್ನಡೆಯಾಗಿರುವುದು ಸರ್ಕಾರಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ, ಈ ಹುದ್ದೆಯನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) 1) ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮುಖ್ಯವಾದ ಯೋಜನೆಗಳಲ್ಲಿ ಒಂದಾದ "ಕನ್ನಡ ಮಾಧ್ಯಮ ಪ್ರಶಸ್ತಿ" ಕಾರ್ಯಕ್ರಮವನ್ನು 2015ರ ಜನವರಿ ಮಾಹೆಯಲ್ಲಿ ನಡೆಸಲು ಉದ್ದೇಶಿಸಲಾಗಿದೆ.

2) "ನ್ಯಾಯಾಂಗದಲ್ಲಿ ಕನ್ನಡ" ಕಾರ್ಯಕ್ರಮವು ಡಿಸೆಂಬರ್ ಕೊನೆ ವಾರದಲ್ಲಿ ನಡೆಯಲಿದೆ.

3) "ಕನ್ನಡ ಚಿಂತನೆ" ಕಾರ್ಯಕ್ರಮ ಪ್ರತೀ ತಿಂಗಳು ಬೆಂಗಳೂರು ಮತ್ತು ಧಾರವಾಡ ಜಿಲ್ಲೆಗಳಲ್ಲಿ ನಡೆಯುತ್ತಿದೆ.

4) ಕನ್ನಡ ಕಲಿಯುಲು ಆಸಕ್ತಿಯಿರುವವರಿಗೆ "ಕನ್ನಡ ಕಲಿಕಾ ಕೇಂದ್ರ" ತರಗತಿಯನ್ನು ಹಮ್ಮಿಕೊಳ್ಳಲಾಗುತ್ತಿದೆ.

5) ಹೊರರಾಜ್ಯದಲ್ಲಿ ಉನ್ನತ ಶಿಕ್ಷಣ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ಬಿಡುಗಡೆ ಮಾಡಲು ವಿವಿಧ ವಿಶ್ವವಿದ್ಯಾಲಯಗಳಿಂದ ಮಾಹಿತಿ ತರಿಸಿಕೊಳ್ಳಲಾಗಿದೆ. ಸಧ್ಯದಲ್ಲಿ ಅನುದಾನ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

6) ಹೊರರಾಜ್ಯ ವಿದ್ಯಾರ್ಥಿಗಳು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾವರಿಗೆ ಪ್ರೋತ್ಸಾಹಧನ ನೀಡಲು ಕ್ರಮಕೈಗೊಳ್ಳಲಾಗುತ್ತಿದೆ.

ಆ) ಕನ್ನಡ ಅಭಿವೃದ್ಧಿ ಪ್ರಾಧಿಕಾರದ 2014–15ನೇ ಸಾಲಿನ ಪರಿಷ್ಕೃತ ಕ್ರಿಯಾಯೋಜನೆಗೆ ಸರ್ಕಾರದ ಅದೇಶ ಸಂಖ್ಯೆ: ಕಸಂವಾ 58 ಕೆಒಎಲ್ 2014, ದಿನಾಂಕ:31.07.2014 ರಲ್ಲಿ ಅನುಮೋದನೆ ನೀಡಿದ್ದು, ಕನ್ನಡ ಭವನಕ್ಕೆ ನೀಡುವ ಸಹಾಯಧನದ ಮೊತ್ತ ₹ 1.00 ಕೋಟಿಯನ್ನು "ಕನ್ನಡ ಜಾನಪದ ನಿಘಂಟು" ಮುದ್ರಣಕ್ಕೆ ವರ್ಗಾಯಿಸಲಾಗಿರುತ್ತದೆ.

ಇ) ದಿನಾಂಕ:10.06.2014 ರಿಂದ 23.11.2014ರವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಹುದ್ದೆ ಖಾಲಿ ಇತ್ತು.

ಈ) ದಿನಾಂಕ:24.11.2014ರ ಅಧಿಸೂಚನೆ ಸಂಖ್ಯೆ: ಕಸಂವಾ 99 ಕೆಒಎಲ್ 2014ರನ್ವಯ ಡಾ. ಎಲ್.ಹನುಮಂತಯ್ಯ ಇವರನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

ಉ) ಉದ್ಭವಿಸುವುದಿಲ್ಲ.